ಸಿ.ಸಿ. ನಂ.21558/2017

<u>50ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು</u>

<u>ಸಿ.ಸಿ. ನಂ.21558/2014</u>

ಪಿ.ಡಬ್ಲೂ -2   ಸಿ.ಡಬ್ಲೂ-6

| | | |
|---|---|---|
| ಸಾಕ್ಷಿದಾರರ ಹೆಸರು | : | ಪ್ರಸನ್ನ |
| ತಂದೆ  ಹೆಸರು | : | ವೆಂಕಟೇಶ |
| ವಯಸ್ಸು | : | 38 ವರ್ಷ |
| ಕೆಲಸ | : | ಲೆಕ್ಕ ಪರಿಶೋಧಕರು |
| ವಾಸ | : | ಕಾಮಾಕ್ಷಿಪಾಳ್ಯ, ಬೆಂಗಳೂರು |

**<u>ಸಾಕ್ಷಿಯನ್ನು ದಿನಾಂಕ:- 10-12-2025 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.</u>**

**<u>ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದ:</u>**

ಆರೋಪಿ ನನಗೆ ಗೊತ್ತಿಲ್ಲ. ಅವರನ್ನು ನಾನು ಈ ಹಿಂದೆ ನೋಡಿಲ್ಲ. ಸಾಕ್ಷಿ ಅಮಾನತ್ತು ಪಂಚನಾಮೆಯಲ್ಲಿ ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5, ಸಾಕ್ಷಿ ಸಹಿ ನಿಪಿ-5(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಎಲ್ಲಿ, ಎಷ್ಟು ವರ್ಷದ ಹಿಂದೆ ಮಾಡಿರುತ್ತೇನೆ ಎಂದು ನೆನಪಿಲ್ಲ. ನಿಪಿ-5 ಕ್ಕೆ ಸಹಿ ಮಾಡುವ ಕಾಲಕ್ಕೆ ಯಾರು ಯಾರು ಇದ್ದರು ಎಂದು ನನಗೆ ಗೊತ್ತಿಲ್ಲ. ನಿಪಿ-5 ರಲ್ಲಿರುವ ಸಂಗತಿಗಳನ್ನು ನಾನು ಓದಿ ತಿಳಿದುಕೊಂಡಿದ್ದರ ಬಗ್ಗೆ ನನಗೆ ನೆನಪಿಲ್ಲ. ಈ ಬಗ್ಗೆ ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದಿಲ್ಲ.

(ಈ ಹಂತದಲ್ಲಿ ಸಾಕ್ಷಿದಾರರು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ, ಹಿ.ಸ.ಸಾ.ಅ. ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲು ಹಿ.ಸ.ಸಾ.ಅ. ರವರಿಂದ:</u>**

ದಿ: 16.05.2017 ರಂದು ಸುಂಕದಕಟ್ಟೆಯ ಸೊಲ್ಲಾಪುರದಮ್ಮ ದೇವಸ್ಥಾನದ ಹತ್ತಿರ ದೇವರಾಜು ರವರ ಬಾಡಿಗೆ ಮನೆಯ ಮುಂದೆ ನಾನು ಹಾಗೂ ಚಾಸಾ7 ರವರು ಕಳ್ಳತನದ ವಿಷಯವಾಗಿ ಅಮಾನತ್ತು ಪಂಚನಾಮೆ ಮಾಡುವ ಕಾಲಕ್ಕೆ ಸಹಿ ಮಾಡಿರುತ್ತೇನೆ

ಎಂದರೆ ಸರಿಯಲ್ಲ. ನಾನು ಸಹಿ ಮಾಡುವ ಕಾಲಕ್ಕೆ ಚಾಸಾ-7 ರವರು ಕೂಡ ಹಾಜರಿದ್ದರು ಎಂದರೆ ಸರಿಯಲ್ಲ. ಅದೇ ರೀತಿ ನಿಪಿ-5 ರ ಕಾಲಕ್ಕೆ ಒಂದು ಸ್ಯಾಮ್ ಸಾಂಗ್ ಕಂಪನಿಯ ಮೊಬೈಲ್ ಮತ್ತು ಎಂ ಐ ಮೊಬೈಲ್ ನ್ನು ಆರೋಪಿ ತಾಯಿ ಭಾಗ್ಯ ಎಂಬುವವರು ನಮ್ಮಗಳ ಮುಂದೆ ಹಾಜರು ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ಆರೋಪಿ ಸದರಿ ಎರಡು ಮೊಬೈಲ್ ಗಳನ್ನು ಕಳ್ಳತನ ಮಾಡಿದ ಹಣದಿಂದ ಖರೀದಿಸಿದ್ದ ಎಂದು ಗೊತ್ತಾಯಿತು ಎಂದರೆ ಸರಿಯಲ್ಲ. ಈ ಬಗ್ಗೆ ನಮ್ಮಗಳ ಸಮಕ್ಷಮ ನಿಪಿ-5 ರಂತೆ ಅಮಾನತ್ತು ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ನನ್ನನ್ನು ಪೊಲೀಸರು ವಿಚಾರಣೆ ಮಾಡಿ ನನ್ನ ಹೇಳಿಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-6 ಎಂದು ಗುರುತಿಸಲಾಯಿತು. ನಿಪಿ-5 ಮತ್ತು 6 ರಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದರೂ ಕೂಡ ಆರೋಪಿಯೊಂದಿಗೆ ರಾಜೀ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ</u>**

ಆರೋಪಿತರ ಪರ ವಕೀಲರಿಂದ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

**ಓ ಹೇ ಕೇ ಸ ಇ ಒ**

Sd/-

**50ನೇ ಅ. ಮು. ಮ. ದಂ. ನ್ಯಾ**